**ಕರ್ನಾಟಕ ಸರ್ಕಾರ** **ಸಿ ಆರ್ ಪಿ ಸಿ 67**

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಸಿಂಧನೂರು.

ಸಿ.ಸಿ. ಸಂಖ್ಯೆಃ 3731/2023 CW-2 PW- 1

| | |
|---|---|
| ಹೆಸರು | ರಾಜೇಶ್ |
| ತಂದೆಯ ಹೆಸರು | ವಿರುಪಣ್ಣ |
| ವಯಸ್ಸು | 29 |
| ಉದ್ಯೋಗ | ಕೂಲಿ ಕೆಲಸ |
| ವಾಸ ಸ್ಥಳ | ಜಾಲಿಹಾಳ |

ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ 10-11-2025

ಮುಖ್ಯ ವಿಚಾರಣೆಃ ಸ ಸ ಅ ಅವರಿಂದ

ಚಾ.ಸಾ. 1 ಮತ್ತು 3 ರ ಪರಿಚಯ ಇದೆ. ಸಾಕ್ಷಿಗೆ ಗುನ್ನಾಸ್ಥಳ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪಂಚನಾಮೆಯನ್ನು ನಿ.ಪಿ. 1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 1(ಎ) ಎಂದು ಗುರುತಿಸಲಾಯಿತು. ಮುಂದುವರೆದು ಸಾಕ್ಷಿ ನಿ.ಪಿ. 1 ಕ್ಕೆ ಸಹಿಯನ್ನು ಜಾಲಿಹಾಳ ಗ್ರಾಮದ ವಾಲ್ಮೀಕಿ ಭವನದ ಚಾ.ಸಾ. 5 ರ ಮನೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ಸುಮಾರು 1 ವರ್ಷದ ಹಿಂದೆ ಮ. 1.30 ರ ಸುಮಾರಿಗೆ ಮಾಡಿರುತ್ತೇನೆ. ನಿ.ಪಿ. 1 ರಲ್ಲಿ ಏನು ಬರೆದುಕೊಂಡಿದ್ದಾರೆಂದು ನನಗೆ ಮಾಹಿತಿ ಇಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿಗೆ ಒಂದು ಕಲ್ಲನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ಗುರುತಿಸಿದ್ದರಿಂದ ಅದನ್ನು ಮು.ಮಾ. 1 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿಲಾಯಿತು.)

ಪಾಟೀ ಸವಾಲು ಃ ಸಸಅ ಅವರಿಂದ

ದಿ: 25-04-2023 ರಂದು ಬೆ. 10.00 ರಿಂದ 11.00 ರವರೆಗೆ ಚಾ.ಸಾ. 1 ರ ಮನೆಯ ಮುಂದೆ ನಿ.ಪಿ. 1 ರಂತೆ ನನ್ನ ಸಮಕ್ಷಮ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ. ನನ್ನ ಮತ್ತು ಚಾ.ಸಾ. 3 ರ ಸಮಕ್ಷಮ ಮು.ಮಾ. 1 ನ್ನು ಜಪ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಜರುಗಿಸಿ ಮು.ಮಾ. 1 ನ್ನು ಜಪ್ತುಪಡಿಸಿಕೊಂಡಿದ್ದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು : ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ.)

ಓ. ಹೇ. ಕೇ. ಸರಿ ಇದೆ,

1 ನೇ ಹೆಚ್ಚುವರಿ ಸಿಜೆ & ಜೆಎಂಎಫ್‌ಸಿ, ನ್ಯಾಯಾಲಯ,

ಸಿಂಧನೂರು.